ಅನುಬಂಧ–1

ಕಾರ್ಯಕ್ರಮಗಳ ವಿವರ

ರಾಜ್ಯವಲಯ

1 ಅಲ್ಪ ಸಂಖ್ಯಾತರ ನಿರ್ದೇಶಕರು

2 ಅಲ್ಪ ಸಂಖ್ಯಾತರರಿಗಾಗಿ ತರಬೇತಿ

3 ಅಲ್ಪ ಸಂಖ್ಯಾತರರಿಗಾಗಿ ಹಾಸ್ಟೆಲ್‌ಗಳು

4 ಅಲ್ಪ ಸಂಖ್ಯಾತರರಿಗಾಗಿ ಶಿಷ್ಯವೇತನ ಮತ್ತು ಪೀಠ

5 ಅಲ್ಪ ಸಂಖ್ಯಾತರ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವವ ವಿದ್ಯಾರ್ಥಿನಿಲಯಗಳು

6 ಅಲ್ಪ ಸಂಖ್ಯಾತರರಿಗಾಗಿ ಸಮುದಾಯ ಭವನ/ಶಾದಿಮಹಲ್ ನಿರ್ಮಾಣ

7 ಅಲ್ಪ ಸಂಖ್ಯಾತರರಿಗಾಗಿ ಹಾಸ್ಟೆಲ್ ಕಟ್ಟಡಗಳ ನಿರ್ಮಾಣ

8 ಅಲ್ಪ ಸಂಖ್ಯಾತರರಿಗಾಗಿ ವೃತ್ತಿ ಪರ ತರಬೇತಿ

9 ಅಲ್ಪ ಸಂಖ್ಯಾತರ ಖಾಸಗಿ ಅನುದಾನಿತ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ

ಜಿಲ್ಲಾ ವಲಯ

1 ಅಲ್ಪ ಸಂಖ್ಯಾತರರಿಗಾಗಿ ಅನಾಥಾಲಯಗಳು

1. ಸ್ವಾವಲಂಬನಾ ಸಾಫ್ಟ್ ಲೋನ್ ಯೋಜನೆ

2. ಅರಿವು ಯೋಜನೆ (ವಿದ್ಯಾಭ್ಯಾಸ ಸಾಲ)

3. ಗಂಗಾ ಕಲ್ಯಾಣ ಯೋಜನೆ.

697(1368) : ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) : ಮಾನ್ಯ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರಕ್ಕೆ ಬರುವ ಸಾವನದುರ್ಗ ಮತ್ತು ದೊಡ್ಡ ಆಲದಮರ ಹಾಗೂ ತಿರುಮಲೆ ಯಾತ್ರಾ ಸ್ಥಳಗಳನ್ನು ಅಭಿವೃದ್ಧಿ ಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಆ) ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಡಿ.ಟಿ. ಜಯಕುಮಾರ್(ಪ್ರವಾಸೋದ್ಯಮ ಸಚಿವರು)

ಅ) ದೊಡ್ಡ ಆಲದ ಮರದ ಬಳಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ಉಪಹಾರ ಗೃಹ ನಿರ್ಮಿಸಿದ್ದು, ಅದನ್ನು ಖಾಸಗೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಸಾವನದುರ್ಗ ಮತ್ತು ತಿರುಮಲೆ ಯಾತ್ರಾ ಸ್ಥಳಗಳಲ್ಲಿ ಅಭಿವೃದ್ಧಿ ಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

698(1369) : ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯುತ್ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

ಇ) ವಿದ್ಯುತ್ ಸಬ್ ಸ್ಟೇಷನ್‌ನನ್ನು ಸ್ಥಾಪಿಸುವ ಉದ್ದೇಶ ಸರ್ಕಾರದಲ್ಲಿ ಇದೆಯೇ;

ಈ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ?

ಶ್ರೀ ಹೆಚ್.ಡಿ. ರೇವಣ್ಣ(ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮಾಗಡಿ ವಿಧಾನ ಸಭಾ ಕ್ಷೇತ್ರಕ್ಕೆ ಈಗ ಮಾಗಡಿ, ತಾವರೆಕೆರೆ ಮತ್ತು ಕುದೂರು ಗ್ರಾಮಗಳಲ್ಲಿರುವ ವಿದ್ಯುತ್ ಉಪ ಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುತ್ತಿದೆ. 06.01.2005 ರಿಂದ ಗ್ರಾಮೀಣ ಪ್ರದೇಶಗಳಿಗೆ ಪ್ರತಿ ದಿನ 9 ಗಂಟೆ 3 ಫೇಸ್ ಹಾಗೂ 9 ಗಂಟೆ ಸಿಂಗಲ್ ಫೇಸಿನ ವಿದ್ಯುತ್ ಸರಬರಾಜನ್ನು ಮಾಡಲಾಗುತ್ತಿದೆ. ಈ ವಿದ್ಯುತ್ ಉಪಕೇಂದ್ರಗಳಿಗೆ ಬೆಂಗಳೂರಿನ ಪೀಣ್ಯ ಮತ್ತು ತುಮಕೂರಿನ ಅಂಚೆಪಾಳ್ಯ ಸ್ವೀಕರಣ ಕೇಂದ್ರಗಳಿಂದ 66 ಕೆ.ವಿ. ಒತ್ತಡದಲ್ಲಿ ವಿದ್ಯುತ್ ಪ್ರವಹಿಸುತ್ತಿದ್ದು, ವಿದ್ಯುತ್ ಪ್ರಸರಣ ಮಾರ್ಗಗಳಲ್ಲಿ ಕೆಲವೊಮ್ಮೆ ವ್ಯತ್ಯಯಗಳುಂಟಾದಾಗ ಮಾತ್ರ ವಿದ್ಯುತ್ ಅಡಚಣೆ ಉಂಟಾಗುತ್ತದೆ.

ಆ) ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿ ವಿದ್ಯುತ್ ಸರಬರಾಜಿನ ಸುಧಾರಣೆಗಾಗಿ, ಮಾಗಡಿಯಲ್ಲಿರುವ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರದ ಸಾಮರ್ಥ್ಯವನ್ನು 12.5 ಎಂ.ವಿ.ಎ ನಿಂದ 20 ಎಂ.ವಿ.ಎ. ಗೆ ಸುಮಾರು 102 ಲಕ್ಷ ರೂ. ವೆಚ್ಚದಲ್ಲಿ ಹೆಚ್ಚಳಗೊಳಿಸಲಾಗಿದೆ. ಈ ಕಾಮಗಾರಿಯನ್ನು ಅಕ್ಟೋಬರ್ 2004 ರಲ್ಲಿ ನಿರ್ವಹಿಸಿದೆ. ಕುದೂರಿನಲ್ಲಿರುವ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರದ ಸಾಮರ್ಥ್ಯವನ್ನು 6.3 ಎಂ.ವಿ.ಎ ನಿಂದ 12.5 ಎಂ.ವಿ.ಎ.ಗೆ ಸುಮಾರು 72 ಲಕ್ಷ ರೂ.ಗಳ ವೆಚ್ಚದಲ್ಲಿ ಹೆಚ್ಚಳಗೊಳಿಸಲಾಗಿದೆ. ಈ ಕಾಮಗಾರಿಯನ್ನು ಜುಲೈ 2004 ರಲ್ಲಿ ನಿರ್ವಹಿಸಿದೆ. ಹಾಗೂ ತಾವರೆಕೆರೆಯಲ್ಲಿರುವ 66/11 ಕೆ.ವಿ. ಉಪ ಕೇಂದ್ರದ ಸಾಮರ್ಥ್ಯವನ್ನು 8 ಎಂ.ವಿ.ಎ. ನಿಂದ 16 ಎಂ.ವಿ.ಎ.ಗೆ ಸುಮಾರು 53 ಲಕ್ಷ ರೂ.ಗಳ ವೆಚ್ಚದಲ್ಲಿ ಹೆಚ್ಚಳಗೊಳಿಸಲಾಗಿದೆ. ಈ ಕಾಮಗಾರಿಯನ್ನು ಜುಲೈ 2004 ರಲ್ಲಿ ನಿರ್ವಹಿಸಲಾಗಿದೆ.

ಇ) ಮಾಗಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇನ್ನೂ ಎರಡು ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಿದೆ.

ಈ) ಮಾಗಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇನ್ನೂ ಉತ್ತಮ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಲು ಗುಡೇಮಾರನಹಳ್ಳಿಯ ಬಳಿ 2X8 ಎಂ.ವಿ.ಎ. 66/11 ಕೆ.ವಿ. ವಿದ್ಯುತ್ ಉಪ-ಕೇಂದ್ರವನ್ನು ಮತ್ತು ತಿಪ್ಪಗೊಂಡನ ಹಳ್ಳಿಯಲ್ಲಿ 1X8 ಎಂ.ವಿ.ಎ 66/11 ಕೆ.ವಿ. ವಿದ್ಯುತ್ ಉಪ-ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ತಾಂತ್ರಿಕ ಸಮನ್ವಯ ಸಮಿತಿಯ ತಾತ್ವಿಕವಾಗಿ ಅನುಮೋದನೆ ನೀಡಿದೆ. ಈ ಪ್ರಸ್ತಾವನೆಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಲಹಾ ಸಮಿತಿಯು ಅನುಮೋದನೆ ನೀಡಿದ ನಂತರ ಮುಂದಿನ ಕ್ರಮಗಳನ್ನು ಜರುಗಿಸಲಾಗುವುದು.

699(1370) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿ ಬಿ.ಎಂ.ಹೆಚ್ ರಸ್ತೆಯು ತುಂಬಾ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ :